# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

"ಜ್ಞಾನ ಸಂಗಮ" ಬೆಳಗಾವಿ – 590 018

ರಾಷ್ಟ್ರೀಯ ಸೇವಾ ಯೋಜನೆ

ಕುಲಸಚಿವರು

ದೂರವಾಣಿ ಸಂ : 0831–2405468

ಫ್ಯಾಕ್ಸ್ ಸಂ : 0831–2405467


ಸಂ. ವಿತಾವಿ/ಬಿ.ಜಿ.ಎಮ್/ರಾ.ಸೇ.ಯೋ–ಸು.ಮ.ವ/39/2018-19/ **5589**

ದಿನಾಂಕ: 22 SEP 2018

**:ಸುತ್ತೋಲೆ:**

**ವಿಷಯ :** ರಾಷ್ಟ್ರೀಯ ಸೇವಾ ಯೋಜನೆಯ ಸುವರ್ಣ ಮಹೋತ್ಸವ ವರ್ಷಾಚರಣೆಯನ್ನು 24.09.2018 ರಿಂದ 24.09.2019 ರವರೆಗೆ ಅರ್ಥಪೂರ್ಣವಾಗಿ ಆಚರಿಸುವ ಬಗೆ.

ಉಲ್ಲೇಖ: ಯುಸೇಇ/ರಾಸೇಯೋ/2018–19/212 ದಿನಾಂಕ: 15.09.2018

***

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ರಾಷ್ಟ್ರೀಯ ಸೇವಾ ಯೋಜನೆಯು 1969ರ ಸೆಪ್ಟೆಂಬರ್ 24 ರಂದು ಅನುಷ್ಠಾನಗೊಂಡು 2019 ಸೆಪ್ಟೆಂಬರ್ 24ಕ್ಕೆ 50 ವರ್ಷಗಳನ್ನು ಪೂರ್ಣಗೊಳಿಸುತ್ತಿದೆ. ಮೇಲಿನ ಉಲ್ಲೇಖದಂತೆ 24.09.2018 ರಿಂದ 24.09.2019ರವರೆಗೆ ಒಂದು ವರ್ಷಗಳ ಕಾಲ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. ಈ ಬಗ್ಗೆ ರಾಜ್ಯ ಮಟ್ಟದ ಸಮಿತಿ ನೀಡುವ ನಿರ್ದೇಶನಗಳನ್ನು ಮುಂದೆ ತಮ್ಮಗೆ ನೀಡಲಾಗುವುದು. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಅಧಿನಕ್ಕೊಳಪಡುವ ಎಲ್ಲಾ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯಗಳು, ಈ ಬಗ್ಗೆ ತಮ್ಮ ಮಟ್ಟದಲ್ಲಿ ಯೋಜನೆಯೊಂದನ್ನು ರೂಪಿಸಿ ಅನುಷ್ಠಾನಗೊಳಿಸಬೇಕಾಗಿದೆ. ಇದಕ್ಕೆ ಸಂಬಂಧಿಸಿದಂತೆ ಈ ಕೆಳಗಿನ ಸಲಹೆಗಳನ್ನು ನೀಡಲಾಗಿದೆ.

1. ದಿನಾಂಕ: 24.09.2018 ರಿಂದ 02.10.2018ರವರೆಗೆ ಯಾವುದಾದರೊಂದು ದಿನ ಕಾಲೇಜುಗಳಲ್ಲಿ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸುವುದು.
2. 24.09.2018 ರಿಂದ 24.09.2019ರವರೆಗಿನ ರಾಷ್ಟ್ರೀಯ ಸೇವಾ ಯೋಜನೆಯ ಎಲ್ಲಾ ಕಾರ್ಯಕ್ರಮಗಳನ್ನು ಸುವರ್ಣ ಮಹೋತ್ಸವದ ನೆನಪಿನಲ್ಲಿ ಆಚರಿಸುವುದು.
3. ಸುವರ್ಣ ಮಹೋತ್ಸವದ ನೆನಪಿನಲ್ಲಿ ವಿಶಿಷ್ಟ ಯೋಜನೆಯೊಂದನ್ನು ಕಾಲೇಜು ಪರಿಸರದಲ್ಲಿ ಅನುಷ್ಠಾನಗೊಳಿಸುವುದು. ಉದಾಹರಣೆಗೆ ಕಾಂಪೌಂಡ್ ಹಾಲ್, ಶೌಚಾಲಯ ನಿರ್ಮಾಣ, ಶಾಲಾ ಕಾಲೇಜುಗಳಿಗೆ ನೆನಪಿನ ಕೊಠಡಿ ನಿರ್ಮಾಣ – ಹೀಗೆ ಯೋಜನೆಯೊಂದನ್ನು ಅನುಷ್ಠಾನಗೊಳಿಸುವುದು. ಇದಕ್ಕೆ ಸ್ಥಳೀಯ ಸಂಸದರ/ಶಾಸಕರ ನಿಧಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಗ್ರಾಮೀಣ ಅಭಿವೃದ್ಧಿ ಇಲಾಖೆ ಹಾಗೂ ಸ್ಥಳೀಯ ಸಂಘ–ಸಂಸ್ಥೆಗಳ ಅನುದಾನಗಳ ಸಹಾಯವನ್ನು ಪಡೆಯಬಹುದಾಗಿದೆ.
4. ಗಿಡ ನೆಡುವಿಕೆ, ರಕ್ತದಾನ, ದೇಹದ ಅಂಗಾಂಗದಾನ, ಆರೋಗ್ಯ ಶಿಬಿರಗಳು ನಿರಂತರವಾಗಿ ನಡೆಸುವುದು.
5. ಉಪನ್ಯಾಸ ವಿಚಾರ ಸಂಕಿರಣಗಳನ್ನು ಸ್ಥಳೀಯ ಸಂಸ್ಥೆಗಳ ಸಹಕಾರದಿಂದ ನಡೆಸುವುದು.
6. ಸ್ಥಳೀಯ ಶಾಲಾ ಕಾಲೇಜುಗಳಲ್ಲಿ ಕಾರ್ಯಕ್ರಮಗಳನ್ನು ಏರ್ಪಡಿಸುವುದು.
7. ಒಂದು ವರ್ಷಗಳ ಕಾಲ ರಾಷ್ಟ್ರೀಯ ಸೇವಾ ಯೋಜನೆಗೆ ಸಂಬಂಧಿಸಿದಂತೆ, ನೀಡುವ ಜಾಹೀರಾತು ಆಮಂತ್ರಣ ಪತ್ರಿಕೆ, ಪತ್ರ ಇತ್ಯಾದಿಗಳಲ್ಲಿ ಈ ಪತ್ರದೊಂದಿಗೆ ನೀಡಿರುವ ಲೋಗೋವನ್ನು ಬಳಸುವುದು.
8. ಎನ್.ಎಸ್.ಎಸ್. ಚಟುವಟಿಕೆಗಳ ಬಗ್ಗೆ, ಫೇಸ್ ಬುಕ್, ವಾಟ್ಸ್ಆಪ್, ಟ್ವಿಟ್ಟರ್ ಮತ್ತು ಯೂಟ್ಯೂಬ್‌ಗಳ ಮೂಲಕ ವ್ಯಾಪಕ ಪ್ರಚಾರವನ್ನು ನೀಡುವುದು.
9. ಸ್ಥಳೀಯ ಅವಶ್ಯಕತೆಗಳನ್ನು ಗಮನಿಸಿ ಕಾರ್ಯಕ್ರಮಗಳನ್ನು ರೂಪಿಸುವುದು.
10. ಸುವರ್ಣ ಮಹೋತ್ಸವ ನೆನಪಿಗಾಗಿ ಪ್ರಕೃತಿ ವಿಕೋಪಕ್ಕೆ ಒಳಗಾದ ಕೊಡಗಿನಲ್ಲಿ ಕಾರ್ಯಕ್ರಮಗಳನ್ನು ಏರ್ಪಡಿಸುವುದು.

ತಾಂತ್ರಿಕ ಮಹಾವಿದ್ಯಾಲಯಗಳು ತಮ್ಮ ಶೈಕ್ಷಣಿಕ ಚಟುವಟಿಕೆಗಳ ಪ್ರಾಯೋಗಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬಹುದಾಗಿದೆ. ಹೀಗೆ ಸುವರ್ಣ ಮಹೋತ್ಸವದ ಸವಿನೆನಪಿನಲ್ಲಿ ವ್ಯಾಪಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಕೋರಿಲಾಗಿದೆ.

ಈ ಬಗ್ಗೆ ಕಾರ್ಯಕ್ರಮಾಧಿಕಾರಿಗಳು **ವಿಶೇಷ ಆಸಕ್ತಿ ವಹಿಸಿ** ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾಗೊಳಿಸಲು ಮತ್ತು ದಿನಾಂಕ: **24.09.2018** ರಿಂದ **02.10.2018**ರೊಳಗೆ ಕಾರ್ಯಕ್ರಮವನ್ನು ಕಾಲೇಜುಗಳಲ್ಲಿ ಉದ್ಘಾಟಿಸಲು ಕ್ರಮ ಕೈಗೊಳ್ಳುವಂತೆ ಕಾರ್ಯಕ್ರಮಾಧಿಕಾರಿಗಳಿಗೆ ಈ ಮೂಲಕ ನಿರ್ದೇಶನ ನೀಡಲು ತಮ್ಮನ್ನು ಕೋರುತ್ತಿದ್ದೇವೆ.

ವಂದನೆಗಳೊಂದಿಗೆ,

22.09.18

ಕುಲಸಚಿವರು

**ಇವರಿಗೆ,**

ಪ್ರಾಂಶುಪಾಲರು ಮತ್ತು ಸಂಯೋಜನಾಧಿಕಾರಿಗಳು, ವಿ.ತಾ.ವಿ. ಅಧಿನಕ್ಕೊಳಪಡುವ ಸಂಬಂದಪಟ್ಟ ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ ಕುಲಪತಿಗಳ ಕಾರ್ಯದರ್ಶಿಗಳ ಮುಖಾಂತರ.
2. ರಾಜ್ಯ ಎನ್.ಎಸ್.ಎಸ್.ಅಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ರಾಷ್ಟ್ರೀಯ ಸೇವಾ ಯೋಜನಾ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು
3. ವಿಶೇಷಾಧಿಕಾರಿಗಳು, ಸಿ.ಎನ್.ಸಿ ವಿಭಾಗ, ವಿತಾವಿ., ಬೆಳಗಾವಿ, ಇವರಿಗೆ ಸದರಿ ಸುತ್ತೋಲೆಯನ್ನು ವಿ.ತಾ.ವಿ.ಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ಕಛೇರಿ ಪ್ರತಿ.